ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

: DEPARTMENT / SUBJECT: ಡಿಕೆಶಿ

NAME OF THE NEWS PAPER: ಉದಯವಾಣಿ     ದಿನಾಂಕ : DATE: 12/3/2020

# ಡಿಕೆಶಿಗೆ ಕೈ ಸಾರಥ್ಯ

ಉದಯವಾಣಿ 12/3/20

## ಕೊನೆಗೂ ಹಲ ದಿನಗಳ ಗೊಂದಲಕ್ಕೆ ತೆರೆ ■ ಜಾತಿ ಕಸರತ್ತು ಮಾಡಿದ ಹೈಕಮಾಂಡ್
## ಸಿದ್ದರಾಮಯ್ಯ ಸ್ಥಾನ ಅಬಾಧಿತ ■ 1 ಪ್ಲಸ್ 3 ಸಿದ್ದು ಸೂತ್ರಕ್ಕೆ ಮಣೆ ಹಾಕಿದ ವರಿಷ್ಠರು

**ಬೆಂಗಳೂರು:** ಕಾಂಗ್ರೆಸ್ ಹೈಕಮಾಂಡ್ ಕಡೆಗೂ ಡಿ.ಕೆ. ಶಿವಕುಮಾರ್ ಅವರನ್ನು ಕೆಪಿಸಿಸಿ ಅಧ್ಯಕ್ಷರನ್ನಾಗಿ ನೇಮಿಸುವ ಮೂಲಕ ಗೊಂದಲಗಳಿಗೆ ತೆರೆ ಎಳೆಯುವ ಪ್ರಯತ್ನ ಮಾಡಿದೆ.

ಮಧ್ಯಪ್ರದೇಶದ ನಾಯಕ ಜ್ಯೋತಿರಾದಿತ್ಯ ಸಿಂಧಿಯಾ ಪಕ್ಷ ತೊರೆದ ಮರುದಿನವೇ ಕಾಂಗ್ರೆಸ್ ಹೈಕಮಾಂಡ್ ರಾಜ್ಯ ಕಾಂಗ್ರೆಸ್‌ನಲ್ಲಿ ಮಹತ್ವದ ಬದಲಾವಣೆ ಮಾಡಿ ಆದೇಶ ಹೊರಡಿಸಿದೆ.

ಈಶ್ವರ್ ಖಂಡ್ರೆ, ಸತೀಶ್ ಜಾರಕಿಹೊಳಿ, ಸಲೀಮ್ ಅಹಮದ್ ಅವರನ್ನು ಕಾರ್ಯಾಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಸಿದ್ದರಾಮಯ್ಯ ಅವರನ್ನು ಶಾಸಕಾಂಗ ಪಕ್ಷದ ನಾಯಕ ಹಾಗೂ ಪ್ರತಿಪಕ್ಷದ ನಾಯಕನ ಹುದ್ದೆಯಲ್ಲಿ ಮುಂದುವರಿಸಿ, ಎರಡೂ ಸದನಗಳಿಗೆ ಪ್ರತಿಪಕ್ಷಗಳ ಮುಖ್ಯ ಸಚೇತಕರನ್ನು ನೇಮಕ ಮಾಡುವ ಮೂಲಕ ಜಾತಿ ಹಾಗೂ ಪ್ರಾದೇಶಿಕತೆ ಆಧಾರದಲ್ಲಿ ಸಮತೋಲನ ಕಾಯ್ದುಕೊಳ್ಳುವ ಕಸರತ್ತು ನಡೆಸಿದೆ. ಒಕ್ಕಲಿಗ, ಲಿಂಗಾಯತ ಮತ್ತು ಅಹಿಂದ ವರ್ಗಕ್ಕೆ ಅಧಿಕಾರ ನೀಡುವ ಮೂಲಕ ಜಾತಿ ಲೆಕ್ಕಾಚಾರವನ್ನು ನಿಭಾಯಿಸಲಾಗಿದೆ.

ರಾಜ್ಯದಲ್ಲಿ 15 ಕ್ಷೇತ್ರಗಳಿಗೆ ಉಪ ಚುನಾವಣೆ ನಡೆದ ನಂತರ ಕೆಪಿಸಿಸಿ ಅಧ್ಯಕ್ಷ ಸ್ಥಾನ ತೆರವಾದಂತೆ ಕಾಂಗ್ರೆಸ್ ನಾಯಕತ್ವದಲ್ಲಿ ಉಂಟಾಗಿದ್ದ ಗೊಂದಲಕ್ಕೆ ಪಕ್ಷದ ಹೈಕಮಾಂಡ್ ಎಲ್ಲರನ್ನೂ ಸಮಾಧಾನ ಪಡಿಸುವ ಪ್ರಯತ್ನ ನಡೆಸಿದ್ದರೂ, ಪಟ್ಟಿಯನ್ನು ಗಮನಿಸಿದಾಗ ಸಿದ್ದರಾಮಯ್ಯ ಒತ್ತಡಕ್ಕೆ ಹೈಕಮಾಂಡ್ ಮಣಿದಂತೆ ಕಾಣಿಸುತ್ತಿದೆ. ಡಿ.ಕೆ.ಶಿವಕುಮಾರ್ ಅವರನ್ನು ಅಧ್ಯಕ್ಷರನ್ನಾಗಿ ಮಾಡಿ ಮಾತು ಉಳಿಸಿಕೊಳ್ಳುವ ಜೊತೆಗೆ ಸಿದ್ದರಾಮಯ್ಯ ಬಯಸಿದಂತೆ ಅವರು ಹೊಂದಿರುವ ಶಾಸಕಾಂಗ ಪಕ್ಷದ ನಾಯಕ ಹಾಗೂ ಪ್ರತಿಪಕ್ಷದ ನಾಯಕ ಎರಡೂ ಹುದ್ದೆಗಳನ್ನು ವಿಭಜಿಸದೆ ಅವರನ್ನೇ ಮುಂದುವರಿಸಿದೆ. ಅವರು ಸೂಚಿಸಿದಂತೆ ವಿಭಾಗ ಹಾಗೂ ಜಾತಿವಾರು ಮೂವರು ಕಾರ್ಯಾಧ್ಯಕ್ಷರ ನೇಮಕ ಮಾಡುವ ಮೂಲಕ ಕಾಂಗ್ರೆಸ್ ಹೈಕಮಾಂಡ್

ಸಂಗ್ರಹ ಚಿತ್ರ



ರಾಜ್ಯ ಕಾಂಗ್ರೆಸ್‌ನಲ್ಲಿ ಸಿದ್ದರಾಮಯ್ಯರನ್ನು ನಿರ್ಲಕ್ಷ್ಯ ಯಾವುದೇ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ ಎಂಬ ಸಂದೇಶ ರವಾನಿಸಿದಂತಿದೆ. ಹೈಕಮಾಂಡ್‌ನ ಈ ನಿರ್ಧಾರ ಮೂಲ ಕಾಂಗ್ರೆಸ್ ನಾಯಕರ ಬೇಸರಕ್ಕೂ ಕಾರಣವಾಗಿದೆ. ಆದರೆ, ಸಿದ್ದರಾಮಯ್ಯ ಸೂಚಿಸಿದವರಿಗೆ ಕೆಪಿಸಿಸಿ ಪಟ್ಟ ದೊರೆಯಲಿಲ್ಲ ಎಂಬ ಸಮಾಧಾನ ಮೂಲ ಕಾಂಗ್ರೆಸ್ ನಾಯಕರಿಗಾದಂತಿದೆ.

**ಒಕ್ಕಲಿಗರು:** ಕಾಂಗ್ರೆಸ್ ಹೈಕಮಾಂಡ್ ಎಲ್ಲವನ್ನೂ ಅಳೆದು ತೂಗಿ ನೂತನ ತಂಡ ರಚನೆ ಮಾಡಿದ್ದು, ಕೆಪಿಸಿಸಿ ಅಧ್ಯಕ್ಷರಾಗಿ ಒಕ್ಕಲಿಗ ಸಮುದಾಯಕ್ಕೆ ಸೇರಿರುವ ಡಿ.ಕೆ. ಶಿವಕುಮಾರ್ ಅವರನ್ನು ನೇಮಿಸಿ ಬೆಂಗಳೂರು ವಿಭಾಗದ ಒಕ್ಕಲಿಗ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಿದಂತಾಗಿದೆ.

▶ 6ನೇ ಪುಟಕ್ಕೆ



### ಕೈ ಹೊಸ ತಂಡ

- **ಡಿ.ಕೆ.ಶಿವಕುಮಾರ್**
  ಕೆಪಿಸಿಸಿ ಅಧ್ಯಕ್ಷ
- **ಈಶ್ವರ್ ಖಂಡ್ರೆ**
  ಕಾರ್ಯಾಧ್ಯಕ್ಷ
- **ಸತೀಶ್ ಜಾರಕಿಹೊಳಿ**
  ಕಾರ್ಯಾಧ್ಯಕ್ಷ
- **ಸಲೀಂ ಅಹಮದ್**
  ಕಾರ್ಯಾಧ್ಯಕ್ಷ
- **ಸಿದ್ದರಾಮಯ್ಯ**
  ಪ್ರತಿಪಕ್ಷ- ಶಾಸಕಾಂಗ ಪಕ್ಷದ ನಾಯಕ
- **ಡಾ. ಅಜಯ್ ಸಿಂಗ್**
  ವಿಧಾನಸಭೆ ಪ್ರತಿಪಕ್ಷದ ಮುಖ್ಯ ಸಚೇತಕ
- **ಎಂ. ನಾರಾಯಣಸ್ವಾಮಿ**
  ವಿಧಾನ ಪರಿಷತ್ ಪ್ರತಿಪಕ್ಷದ ಮುಖ್ಯ ಸಚೇತಕ







### ಮೂವರು ಕಾರ್ಯಾಧ್ಯಕ್ಷರು ಏಕೆ?

ಮೂವರು ಕಾರ್ಯಾಧ್ಯಕ್ಷರ ಹುದ್ದೆಗಳನ್ನು ಸೃಷ್ಟಿಸಿರುವುದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರನ್ನು ನಿಯಂತ್ರಿಸುವ ತಂತ್ರ ಎಂಬ ಮಾತುಗಳು



ಕೇಳಿ ಬರುತ್ತಿದ್ದು, ಯಾರೇ ಅಧ್ಯಕ್ಷರಾದರೂ ಸಿದ್ದರಾಮಯ್ಯ ಅವರ ನಿಯಂತ್ರಣದಲ್ಲಿಯೇ ಮುಂದುವರೆಯುತ್ತದೆ ಎಂಬ ಮಾತುಗಳಿಗೆ ಪುಷ್ಟಿ ನೀಡಿದಂತಾಗಿದೆ. ಏಕೆಂದರೆ, ಮೂವರೂ ಕಾರ್ಯಾಧ್ಯಕ್ಷರಲ್ಲಿ ಈಶ್ವರ್ ಖಂಡ್ರೆ ಹಾಗೂ ಸತೀಶ್ ಜಾರಕಿಹೊಳಿ ಸಿದ್ದರಾಮಯ್ಯ ಅವರ ಅಣತಿಯಂತೆ ನಡೆಯುತ್ತಾರೆ ಎಂಬ ಮಾತುಗಳು ಪಕ್ಷದ ವಲಯದಲ್ಲಿ ಕೇಳಿ ಬರುತ್ತಿವೆ. ಸಲೀಂ ಅಹಮದ್ ಅವರನ್ನು ಹೈಕಮಾಂಡ್ ತನ್ನ ಪ್ರತಿನಿಧಿಯಂತೆ ನೇಮಕ ಮಾಡಿದ್ದು, ಅವರು ಮುಂದಿನ ದಿನಗಳಲ್ಲಿ ಯಾರ ಬಣದೊಂದಿಗೆ ಗುರುತಿಸಿಕೊಳ್ಳುತ್ತಾರೆ ಎನ್ನುವುದೂ ಕೂಡ ಕುತೂಹಲ ಮೂಡಿಸಿದೆ.

### ಎಐಸಿಸಿಗೆ ಪರಂ, ಎಚ್‌ಕೆಪಿ ?

ರಾಜ್ಯಮಟ್ಟದಲ್ಲಿ ಪಕ್ಷದ ಯಾವುದಾದರೂ ಒಂದು ಹುದ್ದೆಯನ್ನು ಹೈಕಮಾಂಡ್ ನೀಡುತ್ತದೆ ಎಂಬ ನಿರೀಕ್ಷೆಯಲ್ಲಿದ್ದ ಹಿರಿಯ ನಾಯಕರಾಗಿರುವ ಮಾಜಿ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹಾಗೂ ಮಾಜಿ ಸಚಿವ ಎಚ್.ಕೆ.ಪಾಟೀಲ್ ಅವರಿಗೆ ಯಾವುದೇ ಹುದ್ದೆ ನೀಡದೆ ಕೈ ಬಿಡಲಾಗಿದ್ದು, ಇಬ್ಬರೂ ನಾಯಕರನ್ನು ಎಐಸಿಸಿ ಮಟ್ಟದಲ್ಲಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅಥವಾ ಸಿಡಬ್ಲ್ಯುಸಿ ಸದಸ್ಯರನ್ನಾಗಿ ನೇಮಿಸುವ ಸಾಧ್ಯತೆ ಇದೆ ಎಂಬ ಮಾತುಗಳು ಕಾಂಗ್ರೆಸ್ ವಲಯದಲ್ಲಿ ಕೇಳಿ ಬರುತ್ತಿವೆ.

1k(a)

ವಿಷಯ: ರಾಜಕೀಯ
ಪತ್ರಿಕೆಯ ಹೆಸರು: ಉದಯವಾಣಿ ದಿನಾಂಕ 12/03/2020

# ಡಿಕೆಶಿಗೆ ಕೈ ಸಾರಥ್ಯ

ಉ.ವಾ. 12/3/20

1ನೇ ಪುಟದಿಂದ ▸ **ಹಿಂದುಳಿದ ವರ್ಗ:** ಶಾಸಕಾಂಗ ಪಕ್ಷದ ನಾಯಕ ಹಾಗೂ ಪ್ರತಿಪಕ್ಷದ ನಾಯಕರಾಗಿ ಸಿದ್ದರಾಮಯ್ಯ ಅವರನ್ನು ಮುಂದುವರಿಸುವ ಮೂಲಕ ಹಿಂದುಳಿದ ವರ್ಗದ ಪ್ರಾತಿನಿಧ್ಯವನ್ನು ಮುಂದುವರಿಸಿದಂತಾಗಿದ್ದು, ಮೈಸೂರು ವಿಭಾಗಕ್ಕೆ ಪ್ರಾಧಾನ್ಯತೆ ನೀಡಿದಂತಾಗಿದೆ.

**ಲಿಂಗಾಯತರು:** ಇನ್ನು ಮೂವರು ಕಾರ್ಯಾಧ್ಯಕ್ಷರಲ್ಲಿ ವೀರಶೈವ ಲಿಂಗಾಯತ ಸಮುದಾಯ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಈಶ್ವರ್ ಖಂಡ್ರೆ ಅವರನ್ನು ಅದೇ ಹುದ್ದೆಯಲ್ಲಿ ಮುಂದುವರಿಸಿ, ಆ ಸಮುದಾಯದ ಪ್ರಾತಿನಿಧ್ಯವನ್ನು ಕಾಂಗ್ರೆಸ್ ಹೈಕಮಾಂಡ್ ಮುಂದುವರಿಸಿದೆ.

**ಪರಿಶಿಷ್ಟರು:** ಮುಂಬೈ ಕರ್ನಾಟಕ ಭಾಗದ ಪ್ರಭಾವಿ ನಾಯಕ ಹಾಗೂ ಎಸ್ಸಿ ಸಮುದಾಯಕ್ಕೆ ಸೇರಿದ ಸತೀಶ್ ಜಾರಕಿಹೊಳಿ ಅವರನ್ನು ಕಾರ್ಯಾಧ್ಯಕ್ಷರನ್ನಾಗಿ ನೇಮಿಸಿದ್ದು, ಎಸ್ಸಿ ಸಮುದಾಯಕ್ಕೆ ಕಾಂಗ್ರೆಸ್‌ನಲ್ಲಿ ಆದ್ಯತೆ ನೀಡುವ ಪ್ರಯತ್ನ ನಡೆಸಲಾಗಿದೆ.

**ಅಲ್ಪಸಂಖ್ಯಾತರು:** ಅಲ್ಪ ಸಂಖ್ಯಾತ ಸಮುದಾಯಕ್ಕೂ ಪ್ರಾತಿನಿಧ್ಯ ನೀಡಿರುವ ಕಾಂಗ್ರೆಸ್ ಹೈಕಮಾಂಡ್, ಎಐಸಿಸಿ ಕಾರ್ಯದರ್ಶಿಯಾಗಿದ್ದ ಸಲೀಂ ಅಹಮದ್ ಅವರಿಗೆ ಕಾರ್ಯಾಧ್ಯಕ್ಷ ಸ್ಥಾನದ ಜವಾಬ್ದಾರಿ ವಹಿಸುವ ಮೂಲಕ ಆ ಸಮುದಾಯವನ್ನು ಕಾಂಗ್ರೆಸ್‌ನಿಂದ ವಿಮುಖರಾಗದಂತೆ ನೋಡಿಕೊಳ್ಳುವ ಪ್ರಯತ್ನ ನಡೆಸಲಾಗಿದೆ.

ಇನ್ನು ವಿಧಾನ ಮಂಡಲದ ಎರಡೂ ಸದನಗಳಲ್ಲಿ ಪ್ರತಿಪಕ್ಷದ ಮುಖ್ಯ ಸಚೇತಕರ ಹುದ್ದೆಗೆ ಸಿದ್ದರಾಮಯ್ಯ ಅವರ ಆಪ್ತರನ್ನೇ ನೇಮಕ ಮಾಡಲಾಗಿದ್ದು, ವಿಧಾನಸಭೆ ಪ್ರತಿಪಕ್ಷದ ಮುಖ್ಯ ಸಚೇತಕ ಸ್ಥಾನಕ್ಕೆ ಜೇವರ್ಗಿ ಶಾಸಕ ಡಾ. ಅಜಯ್ ಸಿಂಗ್ ಅವರನ್ನು ನೇಮಿಸಲಾಗಿದೆ. ಈ ಮೂಲಕ ವ್ಯಕ್ತಿ ಕೇಂದ್ರದಲ್ಲಿ ಪಕ್ಷದ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಪುತ್ರ ಪ್ರಿಯಾಂಕ್ ಖರ್ಗೆಗೆ ಸಂಪುಟದಲ್ಲಿ ಅವಕಾಶ ಕಲ್ಪಿಸಿ, ತಮಗೆ ಸಚಿವ ಸ್ಥಾನ ಸಿಗದಿರುವುದಕ್ಕೆ ಮುನಿಸಿಕೊಂಡಿದ್ದ ಡಾ. ಅಜಯ್ ಸಿಂಗ್ ಅವರನ್ನು ಸಮಾಧಾನ ಪಡಿಸುವ ಯತ್ನ ನಡೆಸಲಾಗಿದೆ. ವಿಧಾನ ಪರಿಷತ್ತಿನಲ್ಲೂ ಕೂಡ ಸಿದ್ದರಾಮಯ್ಯ ಅವರ ಆಪ್ತ ಬಳಗದಲ್ಲಿ ಗುರುತಿಸಿಕೊಂಡಿರುವ ಎಂ. ನಾರಾಯಣಸ್ವಾಮಿಯವರಿಗೆ ಅವಕಾಶ ಕಲ್ಪಿಸಲಾಗಿದೆ.

ಮೇಲ್ಮನೆ ಪ್ರತಿಪಕ್ಷದ ನಾಯಕ ಎಸ್. ಆರ್. ಪಾಟೀಲ್ ಕೂಡ ಸಿದ್ದರಾಮಯ್ಯ ಬಣದಲ್ಲಿಯೇ ಗುರುತಿಸಿಕೊಂಡಿರುವುದರಿಂದ ಕೆಪಿಸಿಸಿ ಅಧ್ಯಕ್ಷರ ಹುದ್ದೆಯನ್ನು ಹೊರತು ಪಡಿಸಿದರೆ ಹೊಸ ತಂಡದಲ್ಲಿ ಬಹುತೇಕ ಸಿದ್ದರಾಮಯ್ಯ ಅವರ ಆಪ್ತರೇ ಹೆಚ್ಚಿರುವುದು ಕಾಂಗ್ರೆಸ್ ಹೈಕಮಾಂಡ್ ಈಗಲೂ ಸಿದ್ದರಾಮಯ್ಯ ಮಾತು ಮೀರಿ ಯಾವುದೇ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ ಎಂಬ ಸಂದೇಶ ರವಾನಿಸಿದಂತಾಗಿದೆ.